158 ಸೇಕ (130)
4KA
04641

# ಕರ್ನಾಟಕ ವಿಧಾನ ಪರಿಷತ್ತು

## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ ಇವರು ನಿಯಮ-72ರಡಿ ಗಮನ ಸೆಳೆಯುವ ಸೂಚನೆಗೆ ಉತ್ತರಿಸುವ ಕುರಿತು.

## ಸೂಚನೆ:-

ಒಳಮೀಸಲಾತಿ ವರ್ಗೀಕರಣವನ್ನು ಪರಿಶಿಷ್ಟ ಜಾತಿಯವರಿಗಷ್ಟೇ ಅಲ್ಲದೆ ಪರಿಶಿಷ್ಟ ಪಂಗಡಗಳಿಗೂ ಮೀಸಲಾತಿ ವರ್ಗೀಕರಣ ಮಾಡುವ ಅಧಿಕಾರ ರಾಜ್ಯ ಸರ್ಕಾರಗಳಿಗೆ ಇದೆ ಎಂದು 2024 ಆಗಸ್ಟ್ 1 ರಂದು ಸುಪ್ರೀಂ ಕೋರ್ಟ್ ನ ಏಳು ಸದಸ್ಯರ ಸಂವಿಧಾನ ಪೀಠವು ಸ್ಪಷ್ಟವಾಗಿ ತೀರ್ಪು ನೀಡಿರುತ್ತದೆ. ಆದರೆ ರಾಜ್ಯ ಸರ್ಕಾರವು ಪರಿಶಿಷ್ಟ ಜಾತಿಗಳಲ್ಲಿ ಮಾತ್ರ ಮೀಸಲಾತಿ ವರ್ಗೀಕರಣ ಮಾಡಿದ್ದು, ಪರಿಶಿಷ್ಟ ಪಂಗಡಗಳಲ್ಲಿಯೂ ಸಹ ಒಳಮೀಸಲಾತಿ ವರ್ಗೀಕರಣ ಮಾಡಿ ಎಲ್ಲಾ ಬುಡಕಟ್ಟು ಸಮುದಾಯಗಳಿಗೂ ಸಹ ಸಮಾನ ಸ್ಥಾನಮಾನದ ಅವಕಾಶ ಸಿಗುವಂತೆ ಆಗಬೇಕೆಂಬ ಸಾರ್ವಜನಿಕ ಮಹತ್ವದ ವಿಷಯದ ಕುರಿತು ಸದನದಲ್ಲಿ ಸನ್ಮಾನ್ಯ ಮುಖ್ಯಮಂತ್ರಿಯವರ ಗಮನವನ್ನು ಸೆಳೆಯಲು ಬಯಸುತ್ತೇನೆ.

## ಉತ್ತರ:-

2011ರ ಜನಗಣತಿ ಪ್ರಕಾರ ಪರಿಶಿಷ್ಟ ಪಂಗಡದ ಜನ ಸಂಖ್ಯೆ 42,48,987 ಇರುತ್ತದೆ. ಕರ್ನಾಟಕ ರಾಜ್ಯ ಪರಿಶಿಷ್ಟ ಪಂಗಡದ ಪಟ್ಟಿಯಲ್ಲಿ 50 ಸಮುದಾಯಗಳು ಸೇರಿರುತ್ತವೆ. ಕರ್ನಾಟಕ ರಾಜ್ಯದ ಪರಿಶಿಷ್ಟ ಪಂಗಡಗಳಲ್ಲಿ ಒಳಮೀಸಲಾತಿಯನ್ನು ಕಲ್ಪಿಸುವ ಕುರಿತಾದ ಪ್ರಸ್ತಾವನೆಯು ಸರ್ಕಾರದ ಮುಂದೆ ಇರುವುದಿಲ್ಲ.

**ಸಂಖ್ಯೆ: STW/SECB/SAD/27/2026**

(ಸಿದ್ದರಾಮಯ್ಯ)
ಮುಖ್ಯಮಂತ್ರಿಗಳು